ಅ.ದಾ.ನಂ.180/2015
ಪಿ.ಡಬ್ಲೂ:2

**<u>ಸಾಕ್ಷಿಯನ್ನು ಇಂದು ದಿನಾಂಕಃ 07.07.2026 ರಂದು ಕರೆಯಿಸಿ ಪ್ರಮಾಣೀಕರಿಸಲಾಯಿತು</u>**
**<u>ಪಾಟೀ ಸವಾಲುಃ ಶ್ರೀ. ಬಿ.ವಿ.ಪಿ., ವಕೀಲರಿಂದ ಪ್ರತಿವಾದಿ ಪರವಾಗಿ</u>**

1. ನಾನು ದಾವಾ ಆಸ್ತಿಗೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ನೋಡಿರುತ್ತೇನೆ. ಸದರಿ ಪಹಣಿ ಪತ್ರಿಕೆಯಲ್ಲಿ ಸಾವಂತ್ರವ್ವ ಹಾಲಪ್ಪ ತುರಡಗಿರವರ ಹೆಸರು ನಮೂದು ಇರುತ್ತದೆ. ಸಾವಂತ್ರವ್ವ ಮೃತ ಪಟ್ಟ ಸುಮಾರು 15 ವರ್ಷಗಳು ಆಗಿರುತ್ತದೆ ಎಂದರೆ ಸರಿ. ದಾವಾ ಆಸ್ತಿಯು ಜೀರಲಭಾವಿ ಸರಹದ್ದಿನಲ್ಲಿ ಬರುತ್ತದೆ. ಪ್ರತಿವಾದಿಯು ದಾವಾ ಆಸ್ತಿಯಲ್ಲಿ ಉಳುಮೆ ಮಾಡುತ್ತಾನೆ ಎಂದರೆ ಸರಿಯಲ್ಲ. ನನ್ನ ತಂದೆಯ ಸಹಿಗಳಿರುವ ದಾಖಲಾತಿಗಳನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನನ್ನ ತಂದೆಯು ಸಹಿ ಮಾಡಿರುವ ದಾಖಲಾತಿಗಳು ಇರುತ್ತವೆ. ನಿಪಿ-1 ಎ ಮತ್ತು 1 ಬಿ ಎಂದು ಗುರುತಿಸಿರುವ ಸಹಿಗಳು ನನ್ನ ತಂದೆಯ ಸಹಿಗಳು ಅಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಃ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ,

1 ನೇ **ಹೆಚ್ಚುವರಿ ಸಿವಿಲ್ ವ ಜೆ ಎಮ್ ಎಫ್ ಸಿ ನ್ಯಾಯಾಧೀಶರು,**
**ಬಸವನ ಬಾಗೇವಾಡಿ.**